**ಕರ್ನಾಟಕ ಸರ್ಕಾರ**

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.

ಸಂಖ್ಯೆ: ಪಪೂಶಿಇ/ಪರೀಕ್ಷೆ/ನೊ&ಫ–01/2017–18 ದಿನಾಂಕ: 10.05.2018

**ಸು ತ್ತೋ ಲೆ**

**ವಿಷಯ:** ಮಾರ್ಚ್–2018ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

**ಉಲ್ಲೇಖ:** ಕಛೇರಿಯ ಸುತ್ತೋಲೆ ಸಂಖ್ಯೆ: ಪಪೂಶಿಇ/ಪರೀಕ್ಷೆ/ನೊ&ಫ/2017–18 ದಿನಾಂಕ 30.04.2018.

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಮಾರ್ಚ್ 2018ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ online ನಲ್ಲಿ ಅರ್ಜಿ ಸಲ್ಲಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ **14.05.2018**ನ್ನು ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು. ಆದರೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸದರಿ ದಿನಾಂಕವನ್ನು **17.05.2018**ರ ವರೆಗೂ ವಿಸ್ತರಿಸಲಾಗಿದೆ. ವಿದ್ಯಾರ್ಥಿಗಳು **Scanned Copy** ಡೌನ್‌ಲೋಡ್ ಮಾಡಿಕೊಳ್ಳಲು ಕೊನೆಯ ದಿನಾಂಕನವನ್ನು **16.05.2018**ರ ವರೆಗೂ ವಿಸ್ತರಿಸಲಾಗಿದೆ. ನಿಗಧಿತ ದಿನಾಂಕದೊಳಗಾಗಿ ತಮ್ಮ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ನಿಗದಿತ ಶುಲ್ಕ ಪಾವತಿಸಿ online ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ. **ಈಗಾಗಲೇ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆಯಲು online ನಲ್ಲಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಮಾತ್ರ, ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಬಹುದು. ಉತ್ತರ ಪತ್ರಿಕೆಗಳ Scanned ಪ್ರತಿ ಪಡೆಯಲು ನಿಗದಿಪಡಿಸಿದ ದಿನಾಂಕವನ್ನು ವಿಸ್ತರಿಸಿರುವುದಿಲ್ಲ.**

ಉತ್ತರಪತ್ರಿಕೆಗಳ ಮರುಮೌಲ್ಯಮಾಪನ ಕೋರಿ ಅರ್ಜಿ ಸಲ್ಲಿಸುವ ದಿನಾಂಕವನ್ನು ಮತ್ತೊಮ್ಮೆ ವಿಸ್ತರಿಸಲಾಗುವುದಿಲ್ಲ.

10/5/18

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಪರೀಕ್ಷಾ ಶಾಖೆಯ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
4. ಗಣಕ ಶಾಖೆಗೆ.